ಸಿವಿಲ್ ನ್ಯಾಯಾಧೀಶರು ಮತ್ತು ಹೆ. ಪ್ರದನ್ಯಾದಂ.ರವರ ನ್ಯಾಯಾಲಯ, ತರೀಕೆರೆ.

ಸಿ.ಸಿ.ನಂ.1733/2022

ದಿನಾಂಕಃ18.01.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಿ.ಡಬ್ಲ್ಯೂಃ1 ಸಿ.ಡಬ್ಲ್ಯೂಃ 1

| | | |
|---|---|---|
| ಸಾಕ್ಷಿಯ ಹೆಸರು | ಃ | ಸಂಜು |
| ತಂದೆಯ ಹೆಸರು | ಃ | ರುದ್ರಪ್ಪ |
| ವಯಸ್ಸು | ಃ | 29 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸ | ಃ | ಅಜ್ಜಂಪುರ, ಹೆಬ್ಬುರು. |

**ಮುಖ್ಯ ವಿಚಾರಣೆಃ** ಮಾನ್ಯ ಸ ಸ ಅ ಅವರಿಂದಃ-

ಮೃತ ರಾಜು ನನ್ನ ಚಿಕ್ಕಪ್ಪ. ಚಾಸಾ 10 ರಿಂದ 13 ರವರು ನನ್ನ ಸಂಬಂಧಿಕರು.

ಮೃತ ರಾಜು ರವರು ಅಪಘಾತದಲ್ಲಿ ತೀರಿಕೊಂಡಿರುತ್ತಾರೆ. ಸದರಿ ಅಪಘಾತ ಹೇಗೆ ಮತ್ತು ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನಾನು ಯಾವುದೇ ದೂರನ್ನು ಹಾಗೂ ಮರು ದೂರನ್ನು ಪೊಲೀಸರಿಗೆ ನೀಡಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯು ದೂರು ಆಗಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿ.ಪಿ.1 ದೂರಿನಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ.

ಸಾಕ್ಷಿಗೆ ಈಗ ಇನ್ನೊಂದು ದಾಖಲೆಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯು ಮಹಜರ್ ಆಗಿದ್ದು ಅದನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿ ಪಿ 2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ಪೋಟೋವನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಪೋಟೋವನ್ನು ನಿಪಿ3 ಎಂದು ಗುರುತಿಸಲಾಯಿತು. ನಿ ಪಿ 3 ನ್ನು ಏತಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ** ಮಾನ್ಯ ಸ ಸ ಅ ರವರಿಂದ ಃ-

ದಿಃ 23.09.2021 ರಂದು ಮಃ 02.30 ರ ಸಮಯದಲ್ಲಿ ರಾಜ್ಯ ಹೆದ್ದಾರಿ ಸಂಖ್ಯೆ 24 ರಲ್ಲಿ ಆರೋಪಿಯು ತನ್ನ ಬಾಬ್ತು ಕಾರು ಸಂಖ್ಯೆ ಕೆ ಎ 66 ಎನ್ 2388 ನ್ನು ಮದ್ಯ ಸೇವನೆ ಮಾಡಿ ಅಜ್ಜಂಪುರ ಕಡೆಯಿಂದ ಹೊಸದುರ್ಗದ ಕಡೆಗೆ ಅತಿ ವೇಗ ಮತ್ತು ಅಜಾಗರುಕತೆಯಿಂದ ಚಾಲನೆ ಮಾಡಿ ರಸ್ತೆಯ ಬಲ ಬದಿಗೆ ಹೋಗಿದ್ದು ಎದುರುಗಡೆಯಿಂದ ಮೃತ ರಾಜಪ್ಪನವರು ಬರುತ್ತಿದ್ದ ಮೋಟಾರ್ ಸೈಕಲ್ ಸಂಖ್ಯೆ ಕೆ ಎ 18 ಎಕ್ಸ್ 2626 ಕ್ಕೆ ಡಿಕ್ಕಿ ಹೊಡಿಸಿದ ಪರಿಣಾಮ ಸದರಿ ರಾಜಪ್ಪ ಹಾಗೂ ಅದರಲ್ಲಿನ ಹಿಂಬದಿ ಸವಾರ ಚಾಸಾ 11 ರವರಿಗೆ ತೀವ್ರ ಸ್ವರೂಪದ ಗಾಯಗಳಾಗಿರುತ್ತದೆ ಎಂದರೆ ಸರಿಯಲ್ಲ. ಸದರಿ ರಾಜಪ್ಪನವರು ಅದೇ ದಿನ ಸಂಜೆ 04.15 ರ ಸಮಯದಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಯಲ್ಲಿ ಸದರಿ ಗಾಯಗಳಿಂದ ಮೃತಪಟ್ಟಿರುತ್ತಾರೆಂದರೆ ಸರಿಯಲ್ಲ. ಆರೋಪಿಯು ಆ ದಿನ ಸದರಿ ಕಾರನ್ನು ಚಲಾಯಿಸಲು ಯಾವುದೇ ಪರವಾನಿಗೆ ಇರಲಿಲ್ಲ ಎಂದರೆ ನನಗೆ ಗೊತ್ತಿಲ್ಲ. ಆ ಬಗ್ಗೆ ನಾನು ನಿ ಪಿ 1 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ನಂತರ ದಿನಾಂಕ 24.09.2021 ರಂದು ಸಂಜೆ 4.00 ರಿಂದ 4.45 ರ ವರೆಗೂ ನಾನು ಸ್ಥಳ ತೋರಿಸಿದ ಮೇರೆಗೆ ಪೊಲೀಸರು ಚಾಸಾ 2 ಮತ್ತು 3 ರವರ ಸಮಕ್ಷಮ

ನಿಪಿ 2 ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ 3 ರಂತೆ ಪೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ 01.10.2021 ರಂದು ಸದರಿ ರಾಜಪ್ಪ ಮೃತ ಪಟ್ಟ ಬಗ್ಗೆ ನಾನು ನನ್ನ ಹೇಳಿಕೆಯನ್ನು ಪೊಲೀಸರಿಗೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ತನ್ನ ಮರು ಹೇಳಿಕೆಯನ್ನು ಈಗ ಓದಿ ಹೇಳಿದ್ದು, ಸಾಕ್ಷಿಯು ತನ್ನ ಹೇಳಿಕೆಯನ್ನು ತಿರಸ್ಕರಿಸಿದ ಮೇರೆಗೆ ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಆರೋಪಿಯೊಂದಿಗೆ ರಾಜೀಯಾಗಿ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದಃ- ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ** ಃ ಇಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಂತೋಷ್ ಕುಮಾರ್ ಪಿ.ಎಸ್.)
ಸಿವಿಲ್ ನ್ಯಾಯಾಧೀಶರು ಮತ್ತು
ಹೆ.ಪ್ರ.ದ.ನ್ಯಾ.ದಂಡಾಧಿಕಾರಿ, ತರೀಕೆರೆ.